# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1539 |
| ಸದಸ್ಯರ ಹೆಸರು | : | ಶ್ರೀ ಅರುಣ ಶಹಾಪುರ. |
| ಉತ್ತರಿಸಬೇಕಾದ ದಿನಾಂಕ | : | 24-09-2021 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಶಾಲೆಗಳಲ್ಲಿನ ಬೋಧಕ /ಬೋಧಕೇತರ ನೌಕರರಿಗೆ ನೀಡುತ್ತಿರುವ ಸೌಲಭ್ಯಗಳನ್ನು ಸಮಾಜ ಕಲ್ಯಾಣ ಇಲಾಖೆಯ ಅಧೀನದ ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳ ಬೋಧಕ/ ಬೋಧಕೇತರ ನೌಕರರಿಗೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಸಮಾಜ ಕಲ್ಯಾಣ ಇಲಾಖೆಯ ಅಧೀನದ ಕ್ರೈಸ್ ಸಂಸ್ಥೆಯ ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಇ.ಜಿ.ಐ.ಎಸ್ (EGIS) ಮೊತ್ತ ನೀಡಲಾಗುತ್ತಿದೆಯೇ; ಈ ಮೊತ್ತದ ಪ್ರಮಾಣ ಎಷ್ಟು; ಇಂದಿನವರೆಗೂ ಎಷ್ಟು ಮೃತ ಕುಟುಂಬದವರಿಗೆ ಈ ಸೌಲಭ್ಯ ನೀಡಲಾಗಿದೆ; ಸರ್ಕಾರಿ ಇಲಾಖೆಯ ಮಹಿಳಾ ನೌಕರರಿಗೆ ನೀಡಿರುವ ಶಿಶುಪಾಲನಾ ರಜೆಯ ಸೌಲಭ್ಯವನ್ನು ವಸತಿ ಶಾಲೆಗಳ ಮಹಿಳಾ ನೌಕರರಿಗೆ ಜಾರಿಗೊಳಿಸಲು ಇರುವ ತೊಡಕುಗಳೇನು: | ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರು ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ. ಆದಾಗ್ಯೂ ಸಹ ಸಂಘದ ಖಾಯಂ ನೌಕರರ ಹಿತದೃಷ್ಟಿಯಿಂದ ದಿನಾಂಕ: 01.08.2016 ರಿಂದ ಅನ್ವಯವಾಗುವಂತೆ ವಾರ್ಷಿಕ ಗುಂಪು ವಿಮೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಈವರೆಗೆ ಅರ್ಹರಿರುವ 15 ಮೃತರ ಕುಟುಂಬಕ್ಕೆ ಈ ಸೌಲಭ್ಯ ನೀಡಲಾಗಿರುತ್ತದೆ.<br><br>ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಮಹಿಳಾ ಸಿಬ್ಬಂದಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಆಇ 4(ಇ) ಸೇನಿಸೇ 2021, ದಿನಾಂಕ:21.06.2021 ರನ್ವಯ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲಾಗುತ್ತಿದೆ. |

| | | |
|---|---|---|
| ಇ) | ರಜಾ ಅವಧಿಯಲ್ಲಿ ಕೋವಿಡ್-19 ರೋಗ ನಿರ್ವಹಣೆಯ ಕರ್ತವ್ಯ ನಿರ್ವಹಿಸಿದ ವಸತಿ ಶಾಲೆಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ನೀಡಿದಂತೆ ಗಳಿಕೆ ರಜೆ(EL) ಗಳನ್ನು ಮಂಜೂರು ಮಾಡದಿರಲು ಕಾರಣಗಳೇನು? | ವಸತಿ ಶಾಲೆ/ಕಾಲೇಜುಗಳಲ್ಲಿ ಕೋವಿಡ್-19 ರೋಗ ನಿರ್ವಹಣೆಯ ಕರ್ತವ್ಯ ನಿರ್ವಹಿಸಿದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಗಳಿಕೆ ರಜೆ(EL) ಗಳನ್ನು ಮಂಜೂರು ಮಾಡಲು ಸಲ್ಲಿಸಿರುವ ಮನವಿಗಳನ್ನು ಪರಿಶೀಲಿಸಿ ನಿಯಮಾನುಸಾರ ಮಂಜೂರು ಮಾಡಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಸಕಇ 417 ಮೊದೇಶಾ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು